**CC.No**.3297/2024 -- **PW**:1

**<u>2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು</u>**

**<u>ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.</u>**

**ದಿಃ 20.12.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಪಿರ್ಯಾದಿ ಸಂಸ್ಥೆಯಲ್ಲಿ ನಾನು ಕಳೆದ 10 ವರ್ಷಗಳಿಂದ ಶಾಖಾ ವ್ಯವಸ್ಥಾಪಕನಾಗಿ ಕೆಲಸ ಮಾಡುತ್ತಿದ್ದೇನೆ. ಆರೋಪಿ ನಮ್ಮ ಸಂಸ್ಥೆಯ ಸದಸ್ಯ ಎಂದು ತೋರಿಸಲು ದಾಖಲೆ ಹಾಜರಪಡಿಸಿಲ್ಲ. ಸದಸ್ಯರಿಗೆ ಮಾತ್ರ ನಾವು ಸಾಲ ಕೊಡುತ್ತೇವೆ ಎಂದರೆ ಸರಿ. ದಿಃ22/05/2018 ರಂದು ನಾವು ಆರೋಪಿಗೆ ಸಾಲ ನೀಡಿರುತ್ತೇವೆ. ನನ್ನ ಪ್ರಮಾಣೀಕೃತ ಹೇಳಿಕೆಯಲ್ಲಿ ಆರೋಪಿ ಸಾಲ ಪಡೆದ ದಿನಾಂಕವನ್ನು ನಮೂದಿಸಿಲ್ಲ ಎಂದರೆ ಸರಿ. ಆರೋಪಿ ನಮ್ಮ ಸಂಸ್ಥೆಯಿಂದ ಸಾಲ ಪಡೆದಿಲ್ಲ ಹಾಗಾಗಿ ದಿನಾಂಕ ನಮೂದಿಸಿಲ್ಲ ಎಂದರೆ ಸರಿಯಲ್ಲ.

2. ಸಾಲಗಾರರು ಬಾಕಿ ಉಳಿಸಿಕೊಂಡಿದ್ದಲ್ಲಿ ಸಾಲ ಮರುಪಾವತಿಸುವಂತೆ ಸಂಸ್ಥೆಯಿಂದ ನೋಟೀಸ್ ಕಳುಹಿಸುತ್ತೇವೆ. ಸದರಿ ನೋಟೀಸನ್ನು ನ್ಯಾಯಾಲಯಕ್ಕೆ ಹಾಜರಪಡಿಸಿಲ್ಲ. ಜಾಮೀನುದಾರರಿಗೆ ಸಹ ನೋಟೀಸ್ ಕೊಡುತ್ತೇವೆ ಆದರೆ ಸದರಿ ನೋಟೀಸಿನ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರಪಡಿಸಿಲ್ಲ. ಆರೋಪಿ ಬೆಳಗಾವಿಯಲ್ಲಿ ಇರುತ್ತಾರೆಂಬ ವಿಷಯ ನಿಮಗೆ ಗೊತ್ತಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಸಾಲದ ಅರ್ಜಿಗಳನ್ನು ಭರ್ತಿ ಮಾಡುವ ಕೆಲಸವನ್ನು ನಮ್ಮ ಸಂಸ್ಥೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಇದ್ದ ನೌಕರರು ಮಾಡುತ್ತಾರೆ ಎಂದರೆ ಸರಿಯಲ್ಲ. ನಾವು ಅಸಲು ಸಾಲದ ಅರ್ಜಿಯ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರಪಡಿಸಿಲ್ಲ ಹಾಗೂ ಟ್ರೂ ಕಾಪಿಯನ್ನು ಮಾತ್ರ ಹಾಜರಪಡಿಸಿರುತ್ತೇವೆ ಎಂದರೆ ಸರಿ.

(**ಮುಂದುವರೆದ ಪಾಟೀ ಸವಾಲುಃ ಮುಂದುವರೆದ ಪಾಟಿ ಸವಾಲಿಗೆ ಆರೋಪಿ ಪರ ವಕೀಲರು ಸಮಯಾವಕಾಶ ಕೋರಿದ್ದು ನೀಡಿ ಮುಂದೂಡಲಾಯಿತು).**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**